## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2696 |
| ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 25.03.2022. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಗ್ರಾಮೀಣ ಪ್ರದೇಶದ ಅಭಿವೃದ್ಧಿ ಕಾರ್ಯ ಮತ್ತು ಸ್ಥಳೀಯ ಆಡಳಿತದಲ್ಲಿ ಮಹಿಳೆಯರ ಸಕ್ರಿಯ ಭಾಗವಹಿಸುವಿಕೆ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿರುವುದು ಸರ್ಕಾರದದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ. |
| (ಆ) | ಸ್ಥಳೀಯ ಆಡಳಿತದಲ್ಲಿ ಮಹಿಳೆಯರ ಸಕ್ರಿಯ ಭಾಗವಹಿಸುವಿಕೆ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿರುವುದರಿಂದ ಸಾರ್ವಜನಿಕ ಮತ್ತು ಸಮುದಾಯದ ನಿರ್ಧಾರಗಳಲ್ಲಿ ಮಹಿಳೆಯರ ಪಾತ್ರ ನಗ-ನಾಣ್ಯವಾಗುತ್ತಿದ್ದು ಲಿಂಗ ಅಸಮಾನತೆಗೂ ದಾರಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ. |
| (ಇ) | ಬಂದಿದ್ದಲ್ಲಿ, ಮಹಿಳೆಯರನ್ನು ಸಶಕ್ತೀಕರಣಗೊಳಿಸುವುದರ ಜೊತೆಗೆ ಸ್ಥಳೀಯ ಆಡಳಿತದಲ್ಲಿ ಮಹಿಳೆಯರನ್ನು ಹೆಚ್ಚು ಹೆಚ್ಚು ಪಾಲ್ಗೊಳ್ಳುವಂತೆ ಮಾಡುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಗಳನ್ನು ಮಹಿಳಾ ಸ್ನೇಹಿಯಾಗಿ ಮಾಡಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು? | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 5 ಮತ್ತು 44 ರಲ್ಲಿ ಗ್ರಾಮ ಪಂಚಾಯತಿಯ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯ ಸ್ಥಾನಗಳಲ್ಲಿ ಅನುಸೂಚಿತ ಜಾತಿಗಳ, ಅನುಸೂಚಿತ ಪಂಗಡಗಳ ಮತ್ತು ಹಿಂದುಳಿದ ವರ್ಗಗಳ, ವ್ಯಕ್ತಿಗಳ ಪ್ರತಿಯೊಂದು ಪ್ರವರ್ಗಕ್ಕೂ ಮೀಸಲಿಟ್ಟಿರುವ ಸ್ಥಾನಗಳಲ್ಲಿ ಮತ್ತು ಮೀಸಲಿಟ್ಟಿರದ ಸ್ಥಾನಗಳಲ್ಲಿ ಶೇ. 50 ರಷ್ಟು ಸ್ಥಾನಗಳನ್ನು ಮಹಿಳೆಯರಿಗಾಗಿ ಮೀಸಲಿರಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಸದರಿ ಅಧಿನಿಯಮದ ಪ್ರಕರಣ 3-ಹೆಚ್ (2)(i) ರಲ್ಲಿ ಮಹಿಳೆಯರ ಮತ್ತು ಮಕ್ಕಳ ಸಬಲೀಕರಣಕ್ಕಾಗಿ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ರೂಪಿಸುವುದಕ್ಕಾಗಿ ಪ್ರತ್ಯೇಕವಾಗಿ ಗ್ರಾಮ ಸಭಾದ ಸಭೆಗಳನ್ನು ಗ್ರಾಮ ಪಂಚಾಯತ್ ಸಭೆಗಳು ನಡೆಯುವುದಕ್ಕೂ ಮೊದಲು ವರ್ಷಕ್ಕೆ ಒಂದು ಬಾರಿಯಾದರೂ ಅವರವರುಗಳಿಗೆ ಪ್ರತ್ಯೇಕವಾಗಿ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚೆ ನಡೆಸುವ ಸಂಬಂಧ ಸಭೆ ಕರೆಯಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಪ್ರತಿ ವರ್ಷ ಗ್ರಾಮ ಪಂಚಾಯತಿಗಳು ಮಹಿಳಾ ಗ್ರಾಮ ಸಭೆಗಳನ್ನು ನಡೆಸುತ್ತಿವೆ.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993, ಪ್ರಕರಣ 58 ರನ್ವಯ ಗ್ರಾಮ ಪಂಚಾಯಿತಿಯು ಮಹಿಳೆಯರ ಸಬಲೀಕರಣವು ಪ್ರಮುಖ ಕಾರ್ಯಗಳಲ್ಲೊಂದಾಗಿದೆ. |

| | | |
|---|---|---|
| | | ಗ್ರಾಮ ಪಂಚಾಯಿತಿಗಳು ಮಹಿಳಾ ಆಧಾರಿತ ಚಟುವಟಿಕೆ / ಕಾರ್ಯಕ್ರಮಗಳಿಗಾಗಿ ಮಹಿಳಾ ಆಧಾರಿತ (ಲಿಂಗಾಧಾರಿತ) ಆಯವ್ಯಯವನ್ನು ತಯಾರಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಸದರಿ ಅಧಿನಿಯಮದ ಪ್ರಕರಣ 58-ಸಿ ರಂತೆ ಗ್ರಾಮ ಪಂಚಾಯತಿ ಪ್ರದೇಶದ ಒಳಗಿರುವ ಕೆಲಸದ ಸ್ಥಳಗಳಲ್ಲಿ, ಶಿಕ್ಷಣ ಸಂಸ್ಥೆಗಳಲ್ಲಿ ಯಾವುದೇ ಇತರ ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರ ಮೇಲಾಗುವ ಲೈಂಗಿಕ ಕಿರುಕುಳವನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಗೆ ವರದಿ ಮಾಡುವುದು ಪ್ರತಿಯೊಂದು, ಗ್ರಾಮ ಪಂಚಾಯತಿಯ ಕರ್ತವ್ಯವಾಗಿದೆ. |

ಸಂಖ್ಯೆ: ಗ್ರಾಅಪ 165 ಗ್ರಾಪಂಅ 2022

**(ಕೆ.ಎಸ್. ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.